# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719

**ಸಂಖ್ಯೆ:ತುವಿ:ಪವಿ:2024-25 :** 765 **ದಿನಾಂಕ:16.12.2024**

## : ಸುತ್ತೋಲೆ :

**ವಿಷಯ : ಸ್ನಾತಕ ಪದವಿಯ ಪರೀಕ್ಷಾ ಶುಲ್ಕಕ್ಕೆ ಸಂಬಂಧಿಸಿದ್ದರ ಬಗ್ಗೆ.**

ಉಲ್ಲೇಖ : ಈ ಕಚೇರಿ ಅಧಿಸೂಚನೆ ಸಂಖ್ಯೆ:ತುವಿ:ಪವಿ:2024-25/759 ದಿನಾಂಕ:10.12.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024-25 ನೇ ಶೈಕ್ಷಣಿಕ ಸಾಲಿನ 2025 ರ ಜನವರಿ/ಫೆಬ್ರವರಿ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿಯ ಪರೀಕ್ಷೆಗಳಿಗೆ ಸಂಬಂಧಿಸಿದಂತೆ UUCMS ತಂತ್ರಾಂಶದ ಮೂಲಕ ಒಂದು, ಮೂರು ಮತ್ತು ಐದನೇ ಸೆಮಿಸ್ಟರ್‌ಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ನವೀನ & ಪೂರಕ) ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳಲು ಈಗಾಗಲೇ ಉಲ್ಲೇಖದನ್ವಯ ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಆದರೆ, ತಾಂತ್ರಿಕ ಕಾರಣಗಳಿಂದಾಗಿ UUCMS ತಂತ್ರಾಂಶದ ಮೂಲಕ ಈ ಕೆಳಕಂಡ ಶುಲ್ಕವನ್ನು ಪಾವತಿಸಲು ಸಾಧ್ಯವಾಗದ ಕಾರಣ, **ವಿವಿಧ ಸ್ನಾತಕ ಪದವಿಯ ಐದನೇ ಸೆಮಿಸ್ಟರ್‌ನ (ನವೀನ & ಪೂರಕ) ಅನ್ವಯಿಸುವ ವಿದ್ಯಾರ್ಥಿಗಳಿಂದ ಮಾತ್ರ ಮೌಖಿಕ ಸಂದರ್ಶನ ಹಾಗೂ ಪ್ರಾಜೆಕ್ಟ್ ವ್ಯಾಲ್ಯೂವೇಷನ್‌ಗೆ ಸಂಬಂಧಪಟ್ಟ ಶುಲ್ಕವನ್ನು ಬಾಹ್ಯವಾಗಿ ಸ್ವೀಕರಿಸಿ ದಿನಾಂಕ:09.01.2025 ರೊಳಗೆ "ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು"** ಇವರ ಖಾತೆಗೆ NEFT/RTGS ಮುಖಾಂತರ ಪಾವತಿಸಿ, ಸಂಬಂಧಿಸಿದ ದಾಖಲೆ ಹಾಗೂ ವಿವರಗಳೊಂದಿಗೆ ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಸಲ್ಲಿಸಲು ಈ ಮೂಲಕ ತಮಗೆ ತಿಳಿಸಲಾಗಿದೆ.

ಇನ್ನುಳಿದಂತೆ ಉಲ್ಲೇಖಿತ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

| ಕ್ರಮ ಸಂಖ್ಯೆ | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಮೌಖಿಕ ಸಂದರ್ಶನ (UG VIVA)<br>[ಒಂದು ವಿಷಯಕ್ಕೆ] | 150-00/- |
| 2. | ಪ್ರಾಜೆಕ್ಟ್ ವ್ಯಾಲ್ಯೂವೇಷನ್ (UG PROJECT EVALUATION)<br>[ಒಂದು ವಿಷಯಕ್ಕೆ] | 100-00/- |

16/12/24

**ಕುಲಸಚಿವರು (ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರುಗಳು, ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.